ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಬುಧವಾರ ೧೬ನೇ ಫೆಬ್ರವರಿ ೧೯೯೪, ಮಾಘ ೨೫, ಶಕ ೧೯೧೫

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಮಧ್ಯಾಹ್ನ ೧.೦೫ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ವಿ.ಎಸ್. ಕೌಜಲಗಿ) ಅವರು ಪೀಠವನ್ನು ಅಲಂಕರಿಸಿದ್ದರು.

ಅಧ್ಯಕ್ಷರು : ಸದನವನ್ನು ಈಗ ಮುಂದೂಡುತ್ತಿದ್ದೇನೆ. ಸದನವು ಪುನಃ 2 ಗಂಟೆಗೆ ಸಮಾವೇಶಗೊಳ್ಳುವುದು.

(ಸದನವು 1 ಗಂಟೆ 7 ನಿಮಿಷಕ್ಕೆ ಮುಂದೂಡಲ್ಪಟ್ಟು 2 ಗಂಟೆಗೆ ಸೇರಲು ನಿಶ್ಚಯಿಸಿತು)

ಸದನವು ಮಧ್ಯಾಹ್ನ 2 ಗಂಟೆ 20 ನಿಮಿಷಕ್ಕೆ ಪುನರಾರಂಭಗೊಂಡಿತು.

ಸನ್ಮಾನ್ಯ ಶ್ರೀ ವಿ.ಎಸ್. ಕೌಜಲಗಿಯವರು ಅಧ್ಯಕ್ಷ ಪೀಠವನ್ನಲಂಕರಿಸಿದರು

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು. -

ಗುತ್ತಿಗೆ ಆಧಾರದ ಮೇಲೆ ವೈದ್ಯರುಗಳ ನೇಮಕ

318 - ಶ್ರೀ ಪಿ. ಬಸವರಾಜ್ (ಬ್ರಹ್ಮಾವರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಖಾಲಿ ಇರುವ ವೈದ್ಯರ ಸ್ಥಾನಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆರೋಗ್ಯ ಮತ್ತು ಕುಟುಂಬ ಇಲಾಖೆಯು ಬಹಳ ಸಮಯದ ಹಿಂದೆ ಯೋಚಿಸಿರುವುದು ನಿಜವೇ?

ಆ) ಗ್ರಾಮಾಂತರ ಪ್ರದೇಶದಲ್ಲಿ ಮುಖ್ಯವಾಗಿ ವೈದ್ಯರ ಕೊರತೆ ಇದ್ದು ಅಲ್ಲಿನ ಸಾರ್ವಜನಿಕರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದಲ್ಲಿ ವೈದ್ಯರ ಆಯ್ಕೆಯ ಪ್ರತಿಕ್ರಿಯೆಯನ್ನು ಸರ್ಕಾರ ಕೂಡಲೇ ಮಾಡುವುದೇ?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಹೌದು.

ಇ) ಹೌದು.

ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಕರೆಯಲಾಗಿದ್ದು, ಅರ್ಜಿಗಳನ್ನು ಪರಿಶೀಲಿಸಿ ಆದಷ್ಟು ಜಾಗ್ರತೆಯಾಗಿ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಶ್ರೀ ಪಿ. ಬಸವರಾಜ್ : ಅಧ್ಯಕ್ಷರೇ ರಾಜ್ಯದ ಗ್ರಾಮಾಂತರ ಪ್ರದೇಶದ ಆರೋಗ್ಯ ಕೇಂದ್ರಗಳಲ್ಲಿರುವ ವೈದ್ಯಾಧಿಕಾರಿಗಳ ಕೊರತೆ ಬಗ್ಗೆ ನಾನು ಪ್ರಶ್ನೆ ಕೇಳಿದ್ದೆ. ಖಾಲಿ ಇರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತುಂಬುತ್ತೇವೆಂದು ಉತ್ತರದಲ್ಲಿ ಹೇಳಿದ್ದಾರೆ. ಅದನ್ನು ತುಂಬಲಿಕ್ಕೆ ಒಂದು ಟೈಂಲಿಮಿಟ್ ಇಟ್ಟು ತುಂಬಿದರೆ ಪ್ರಯೋಜನವಾಗುತ್ತದೆ. ಯಾವಾಗ ತುಂಬುತ್ತೀರಿ? ಕಳೆದ ಒಂದು ವರ್ಷದಿಂದಲೂ ಆ ಹುದ್ದೆ ಖಾಲಿ ಇದ್ದು, ಆಸ್ಪತ್ರೆ ಇದ್ದು ವೈದ್ಯರು ಇಲ್ಲದೇ ಇರುವುದರಿಂದ ಯಾವಾಗ ತುಂಬುತ್ತೀರಿ?

ಶ್ರೀ ಬಿ.ಎಸ್. ಪಾಟೀಲ್ : ಅಧ್ಯಕ್ಷರೇ, ಈಗಾಗಲೇ ನಮ್ಮ ನಮ್ಮ ಇಲಾಖೆಯಲ್ಲಿ ಖಾಲಿ ಇರುವಂತಹ ಹುದ್ದೆಗಳನ್ನು ತುಂಬುವ ಸಲುವಾಗಿ ನಾವು ಕಾರ್ಯಕ್ರಮ ಹಾಕಿಕೊಂಡಿದ್ದೇವೆ. 1992 ಅಕ್ಟೋಬರ್‌ನಲ್ಲಿ 380, ಹಾಗೂ 93ರಲ್ಲಿ 374 ಈ ತರಹ 774 ವೈದ್ಯರನ್ನು ನಾವು ತುಂಬಿಕೊಂಡಿದ್ದು ಬಹಳಷ್ಟು ಕಡೆ ವೈದ್ಯರನ್ನು ತುಂಬಲಾಗಿದೆ. ಈಗ ಗ್ರಾಮಾಂತರ ಪ್ರದೇಶದಲ್ಲಿ 336 ಹಾಗೂ ಪಟ್ಟಣ ಪ್ರದೇಶದಲ್ಲಿ 105 ಹುದ್ದೆಗಳು ಮಾತ್ರ ನಮ್ಮಲ್ಲಿ ಖಾಲಿ ಇದ್ದು ಈಗಾಗಲೇ ಅವುಗಳನ್ನು ಭರ್ತಿ ಮಾಡುವ ಸಲುವಾಗಿ ಅರ್ಜಿಗಳನ್ನು ಕರೆದಿದ್ದೇವೆ. ಅತಿ ಹೆಚ್ಚು ಎಂದರೆ ಒಂದೂವರೆ ತಿಂಗಳಲ್ಲಿ ಆ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ನಾವು ಕ್ರಮ ತೆಗೆದುಕೊಳ್ಳುತ್ತೇವೆ.

ಶ್ರೀ ಪಿ. ಬಸವರಾಜ್ : ನನ್ನ ಮತದಾರ ಕ್ಷೇತ್ರದ ಸಾಲಿಗ್ರಾಮ ಸಾಸ್ತಾನ್ನಲ್ಲಿ ಖಾಲಿಯಾಗಿ ಒಂದು ವರ್ಷವಾಯಿತು, ಅದನ್ನು ಕೂಡಲೇ ತುಂಬಿಸುತ್ತೀರಾ ಎಂದು ಕೇಳುತ್ತೇನೆ.

ಶ್ರೀ ಬಿ.ಎಸ್. ಪಾಟೀಲ್ : ಅಧ್ಯಕ್ಷರೇ, ಹಿಂದೆ ಇದೇ ಸದನದಲ್ಲಿ ನಾನು ಹೇಳಿದ್ದೇನೆ. ಇನ್ನು ಒಂದೂವರೆ ತಿಂಗಳಲ್ಲಿ ನಮ್ಮ ರಾಜ್ಯದಲ್ಲಿ ಯಾವಾವ ಮೂಲೆಯಲ್ಲಿ ಹೋದರೂ ಕೂಡ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಹಿಳಾ ವೈದ್ಯ ಅಥವಾ ಪುರುಷವೈದ್ಯರಾಗಲಿ ಖಾಲಿ ಇಲ್ಲವೆಂಬ ರೀತಿ ಸರ್ಕಾರ ಭರ್ತಿ ಮಾಡುವ ಸಲುವಾಗಿ ಕಾರ್ಯಕ್ರಮ ಹಾಕಿಕೊಂಡಿದೆ. ಅದನ್ನು ತುಂಬುವ ವ್ಯವಸ್ಥೆ ಕೂಡ ಮಾಡಲಾಗುವುದು.

ಶಿವಮೊಗ್ಗ ಜಿಲ್ಲೆಯಲ್ಲಿ ಆರೋಗ್ಯ ಕೇಂದ್ರಗಳು.

222 - ಡಿ.ಬಿ. ಗಂಗಪ್ಪ (ಹೊನ್ನಳ್ಳಿ) : ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

ಆ) ಹಾಗಿದ್ದಲ್ಲಿ ಅವುಗಳನ್ನು ಯಾವ ಯಾವ ತಾಲ್ಲೂಕಿನಲ್ಲಿ ತೆರೆಯಲಾಗಿದೆ.

ಇ) ಹೊನ್ನಾಳಿ ತಾಲ್ಲೂಕಿನ ಕೊಟೆ ಮಲ್ಲೂರು ಮತ್ತು ಕಂಚಿಕೊಪ್ಪಗಳಲ್ಲಿ ಆರೋಗ್ಯ ಕೇಂದ್ರಗಳನ್ನು ತೆರೆಯಲು ಸರ್ಕಾರ ಕೈಗೊಂಡಿದೆಯೇ?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 90-91ನೇ ಸಾಲಿನಿಂದ ಶಿವಮೊಗ್ಗ ಜಿಲ್ಲೆಗೆ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರ ಕೆಳಗಿನಂತಿವೆ.

90-91	91-92	92-93	ವಿ93-94
1	3	4	2